ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.
E-mail:Commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ: ಪಿಯು-1/3026/ಸಿಬ್ಬಂದಿ/ಎನ್‌ಓಸಿ/ಸಿಆರ್4/2015-16 ದಿನಾಂಕ -1-2016.

**ಜ್ಞಾಪನ**

ವಿಷಯ:- ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ವಿವಿಧ ಇಲಾಖೆಗಳಲ್ಲಿ ಆಹ್ವಾನಿಸಿರುವ ಹುದ್ದೆಗಳಿಗೆ ಅನುಮತಿ ನೀಡುವ ಬಗ್ಗೆ.

ಉಲ್ಲೇಖ:- ಉಪನಿರ್ದೇಶಕರು/ಪ್ರಾಚಾರ್ಯರ ಮನವಿ ಪತ್ರಗಳು

****

ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳು ಜಿಲ್ಲಾ ಉಪನಿರ್ದೇಶಕರ/ಪ್ರಾಂಶುಪಾಲರುಗಳ ಮುಖೇನ ಉಲ್ಲೇಖಿತ ಪತ್ರಗಳಲ್ಲಿ ವಿವಿಧ ಇಲಾಖೆಗಳಲ್ಲಿ ಆಹ್ವಾನಿಸಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಉಪನ್ಯಾಸಕರಿಗೆ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತಿಗೊಳಪಟ್ಟು ಅನುಮತಿ ನೀಡಿದೆ

| ಕ್ರ.ಸ | ಹೆಸರು, ಹುದ್ದೆ ಮತ್ತು ಕಾಲೇಜು ವಿಳಾಸ ಶ್ರೀಮತಿ/ಶ್ರೀ | ಅನುಮತಿ ಕೋರಲಾದ ಹುದ್ದೆ |
|---|---|---|
| 1 | ಸುರೇಶ ಹೆಚ್ ಎಲ್,<br>ರಾಜ್ಯಶಾಸ್ತ್ರ ಉಪನ್ಯಾಸಕರು<br>ಸರ್ಕಾರಿ ಪದವಿ ಪೂರ್ವ ಕಾಲೇಜು,<br>ದೊಡ್ಡಮಗ್ಗೆ, ಅರಕಲಗೂಡು<br>ಹಾಸನ ಜಿಲ್ಲೆ. | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಉಪ ನೊಂದಾಣಾಧಿಕಾರಿ. |
| 2 | ಶಿವಲಿಂಗಪ್ಪ,<br>ಇತಿಹಾಸ ಉಪನ್ಯಾಸಕರು<br>ಸರ್ಕಾರಿ ಪದವಿ ಪೂರ್ವ ಕಾಲೇಜು.<br>ಮಸರಕಲ್, ದೇವದುರ್ಗ.<br>ರಾಯಚೂರು ಜಿಲ್ಲೆ. | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಗ್ರೂಪ್ ಸಿ ತಾಂತ್ರಿಕೇತರ ಅಧಿಕಾರಿ ಹುದ್ದೆಗೆ |
| 3 | ಸುಭಾಷ್ಚಂದ್ರ ರಾಮಪ್ಪ<br>ರಾಜ್ಯಶಾಸ್ತ್ರ ಉಪನ್ಯಾಸಕರು<br>ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು.<br>ಆಳಂದ, ಕಲಬುರಗಿ ಜಿಲ್ಲೆ. | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಉಪ ನೊಂದಾಣಾಧಿಕಾರಿ. |
| 4 | ಶಿವಕುಮಾರ.<br>ಇತಿಹಾಸ ಉಪನ್ಯಾಸಕರು.<br>ಸರ್ಕಾರಿ ಪದವಿ ಪೂರ್ವ ಕಾಲೇಜು.<br>ಜಾಲಹಳ್ಳಿ, ದೇವದುರ್ಗ.<br>ರಾಯಚೂರು ಜಿಲ್ಲೆ. | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಗ್ರೂಪ್ ಸಿ ತಾಂತ್ರಿಕೇತರ ಅಧಿಕಾರಿ ಹುದ್ದೆಗೆ |

**ಷರತ್ತುಗಳು:**

1. ಸದರಿ ಸಿಬ್ಬಂದಿಗಳು, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸಿಬ್ಬಂದಿಗಳು. ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು. ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ. ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.

3. ಸದರಿ ಸಿಬ್ಬಂದಿಗಳು ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
4. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

**ಜಂಟಿ ನಿರ್ದೇಶಕರು(ಆಡಳಿತ),**
**ಪದವಿ ಪೂರ್ವ ಶಿಕ್ಷಣ ಇಲಾಖೆ.**

*ಪ್ರತಿಗಳು,*

1. ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರಿಗೆ. ಮಾಹಿತಿಗಾಗಿ
2. ಸಂಬಂಧಿಸಿದ ಉಪನ್ಯಾಸಕರುಗಳಿಗೆ ಪ್ರಾಚಾರ್ಯರ ಮೂಲಕ
3. ಸಹಾಯಕ ನಿದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು- ಅಂತರ್ಜಾಲದಲ್ಲಿ ಪ್ರಕಟಿಸಲು
4. ಕಛೇರಿ ಪ್ರತಿ.